**Akashvani : Bangalore**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**05.04.2024 / 14.30 hrs**

**<u>ಮುಖ್ಯಾಂಶಗಳು</u>**

**೧. ಡಾ. ಬಾಬು ಜಗಜೀವನ್ ರಾಮ್ ಅವರ ೧೧೭ನೇ ಜನ್ಮ ದಿನಾಚರಣೆ; ವಿವಿಧ ಜಿಲ್ಲೆಗಳಲ್ಲಿ ಸಾಂಕೇತಿಕ ಆಚರಣೆ**

**೨. ಇದೇ ೧೨ ರಿಂದ ಲೋಕಸಭಾ ಚುನಾವಣೆಯ ೨ನೇ ಹಂತದ ನಾಮಪತ್ರ ಸಲ್ಲಿಕೆ ಆರಂಭ**

**೩. ಮತದಾನ ಪ್ರಮಾಣ ಹೆಚ್ಚಿಸಲು ಸ್ವೀಪ್ ಸಮಿತಿ ವತಿಯಿಂದ ರಾಜ್ಯದೆಲ್ಲೆಡೆ ಜಾಗೃತಿ ಕಾರ್ಯಕ್ರಮ**

**೪. ಮಂಡ್ಯ ಜಿಲ್ಲಾ ಸಂಸದೆ ಸುಮಲತಾ ಅಂಬರೀಶ್ ಇಂದು ಬಿಜೆಪಿ ಪಕ್ಷಕ್ಕೆ ಸೇರ್ಪಡೆ**

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಾ. ಬಾಬು ಜಗಜೀವನ್ ರಾಮ್ ಅವರ ೧೧೭ನೇ ಜನ್ಮ ದಿನಾಚರಣೆ ಪ್ರಯುಕ್ತ ವಿಧಾನ ಸೌದದಲ್ಲಿರುವ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ಸಮಾಜ ಕಲ್ಯಾಣ ಸಚಿವ ಹೆಚ್.ಸಿ. ಮಹದೇವಪ್ಪ, ಹಿರಿಯ ಶಾಸಕ ಈ. ತುಕಾರಾಮ್, ಮಾಜಿ ಸಚಿವ ಹೆಚ್.ಆಂಜನೇಯ, ವಿಧಾನ ಪರಿಷತ್ ಸದಸ್ಯ ಸುದಾಮ ದಾಸ್, ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಸೇರಿ ಹಲವರು ಉಪಸ್ಥಿತರಿದ್ದರು. ದಾವಣಗೆರೆ ಜಿಲ್ಲಾಧಿಕಾರಿ ಕಚೇರಿಯಲ್ಲಿಂದು ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಂ ಅವರ ಜನ್ಮ ಜಯಂತಿಯನ್ನು ಸಾಂಕೇತಿಕವಾಗಿ ಆಚರಿಸಲಾಯಿತು. ಲೋಕಸಭಾ ಚುನಾವಣೆ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಸರಳವಾಗಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ಜಗಜೀವನರಾಂ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಮಂಡ್ಯದ ಡಿಸಿ ಪಾರ್ಕ್ ಎದುರು ಇರುವ ಜಗಜೀವನ್‌ರಾಮ್ ಪ್ರತಿಮೆಗೆ ಜಿಲ್ಲಾಡಳಿತದ ವತಿಯಿಂದ ಮಾಲಾರ್ಪಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ, ಎಸ್ಪಿ ಎನ್.ಯತೀಶ್ ಸೇರಿದಂತೆ ಅಧಿಕಾರಿಗಳ ವರ್ಗ ಹಾಗೂ ಜಗಜೀವನ್‌ರಾಮ್ ಅನುಯಾಯಿಗಳು ಭಾಗವಹಿಸಿದ್ದರು. ಹಸಿರು ಕ್ರಾಂತಿಯ ಹರಿಕಾರ, ಮಾಜಿ ಉಪ ಪ್ರಧಾನಿ ಬಾಬು ಜಗಜೀವನ ರಾಂ ಅವರ ಅವರ ೧೧೭ನೇ ಜಯಂತಿಯನ್ನು ಹಾವೇರಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಾಂಕೇತಿಕವಾಗಿ ಆಚರಿಸಲಾಯಿತು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬಾಬು ಜಗಜೀವನ್ ರಾಂ ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಜಿಲ್ಲಾಧಿಕಾರಿ ರಘುನಂದನ ಮೂರ್ತಿ ಪುಷ್ಪಾರ್ಚನೆ ಮಾಡಿ ಗೌರವ ನಮನ ಸಲ್ಲಿಸಿದರು.

**<><*<><>*><>**

ಹಾವೇರಿ ಲೋಕಸಭಾ ಕ್ಷೇತ್ರದ ಚುನಾವಣೆಗೆ ಇದೇ ಏಪ್ರಿಲ್ ೧೨ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ. ಏಪ್ರಿಲ್ ೧೯ರಂದು ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದೆ. ಅಭ್ಯರ್ಥಿಗಳು ಖುದ್ದಾಗಿ ನಾಮಪತ್ರ ಸಲ್ಲಿಸಬಹುದು ಅಥವಾ ಭಾರತ ಚುನಾವಣಾ ಆಯೋಗದ ಆನ್‌ಲೈನ್ ಮೂಲಕವೂ ನಾಮಪತ್ರ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ. 'ಸುವಿಧಾ' ಅಪ್ಲಿಕೇಷನ್ ಮೂಲಕ ನಾಮಪತ್ರ ಸಲ್ಲಿಸಬಹುದು. ಆನ್‌ಲೈನ್ ಮೂಲಕ ನಾಮಪತ್ರ ಸಲ್ಲಿಸಿದ ನಂತರ ಕಡ್ಡಾಯವಾಗಿ ನಾಮಪತ್ರ ಸಲ್ಲಿಕೆಯ ಕೊನೆಯ ದಿನಾಂಕಕ್ಕೆ ಒಂದು ದಿನ ಮುಂಚಿತವಾಗಿ ಅಂದರೆ ಏಪ್ರಿಲ್ ೧೮ ರೊಳಗಾಗಿ ಮುದ್ರಿತ ನಾಮಪತ್ರದ

ಪ್ರತಿಯನ್ನು ಖುದ್ದಾಗಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಬೇಕು ಎಂದರು. ಇದೇ ೨೨ರ ಸಂಜೆ ೫ ಗಂಟೆವರೆಗೆ ನಾಮಪತ್ರ ಹಿಂಪಡೆಯಲು ಅವಕಾಶ ಕಲ್ಪಿಸಲಾಗಿದೆ. ಕೇವಲ ಆನ್‌ಲೈನ್ ಮೂಲಕ ನಾಮಪತ್ರ ಸಲ್ಲಿಸಿ, ಮುದ್ರಿತ ಪ್ರತಿ ಸಲ್ಲಿಸದೇ ಇದ್ದರೆ ಆ ಅಭ್ಯರ್ಥಿಯ ಉಮೇದುವಾರಿಕೆ ಸಿಂಧು ಆಗುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

**<><*<><>*><>**

ಇದೇ ೨೬ರಂದು ಮೊದಲ ಹಂತದಲ್ಲಿ ರಾಜ್ಯದ ೧೪ ಲೋಕಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದ್ದು, ಜಿಲ್ಲೆಗಳಲ್ಲಿ ಮತದಾರರ ಜಾಗೃತಿ ಕಾರ್ಯಕ್ರಮಗಳು ಚುರುಕುಗೊಂಡಿವೆ. ಸಾರ್ವತ್ರಿಕ ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕಿನಲ್ಲಿ ಸ್ವೀಪ್ ಚಟುವಟಿಕೆ ಕಾರ್ಯಕ್ರಮಕ್ಕೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಇಒ ಲೋಕೇಶ್ ಮೂರ್ತಿ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ದೇಶದ ಸುಭದ್ರತೆ ಹಾಗೂ ಉತ್ತಮ ನಾಯಕತ್ವಕ್ಕೆ ಮತ ಚಲಾಯಿಸುವ ಮೂಲಕ ಉತ್ತಮ ಅಭ್ಯರ್ಥಿಗಳನ್ನು ಸಂಸತ್‌ಗೆ ಕಳುಹಿಸಲು ಯುವ ಮತದಾರರು ಮುಂದಾಗಬೇಕೆಂದು ಕರೆ ನೀಡಿದರು. ಗದಗ ಜಿಲ್ಲಾ ಮತ್ತು ನರಗುಂದ ತಾಲ್ಲೂಕು ಚುನಾವಣೆ ಸ್ವೀಪ್ ಸಮಿತಿ ವತಿಯಿಂದ ಮತದಾನ ಜಾಗೃತಿ ಜಾಥ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಗ್ರಾಮೀಣ ಪ್ರದೇಶಗಳ ಮತದಾರರಲ್ಲಿ ಕಡ್ಡಾಯ ಮತದಾನ ಬಗ್ಗೆ ಮಹಿಳಾ ಸ್ವ-ಸಹಾಯ ಸಂಘಗಳ ಕಾರ್ಯಕರ್ತೆಯರು  ಜಾಗೃತಿ ಮೂಡಿಸಿ, ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಮತದಾನದ ಪ್ರಮಾಣ ಹೆಚ್ಚಳಕ್ಕೆ ಶ್ರಮವಹಿಸಬೇಕೆಂದು ಗದಗ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಸಿ.ಬಿ.ದೇವರಮನಿ ಹೇಳಿದರು.  ಗ್ರಾಮೀಣ ಪ್ರದೇಶಕ್ಕಿಂತ ನಗರ ಪ್ರದೇಶದಲ್ಲಿ ಮತದಾನದ ಸಂಖ್ಯೆ ಕಡಿಮೆ ಇದೆ. ಮತದಾನದ ಪ್ರಮಾಣ ಕಡಿಮೆ ಇದ್ದೆಡೆ ಅರಿವು ಮೂಡಿಸುವ ಮೂಲಕ ಮತದಾರರನ್ನು ಮತಗಟ್ಟೆಗಳಿಗೆ ಕರೆತರುವ ಸಲುವಾಗಿ ಮತದಾನ ಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ ಎಂದು ಧಾರವಾಡ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಹೇಳಿದ್ದಾರೆ. ಹುಬ್ಬಳ್ಳಿಯ ಕಿತ್ತೂರ ರಾಣಿ ಚೆನ್ನಮ್ಮ ವೃತ್ತದಲ್ಲಿ ಆಯೋಜಿಸಿದ್ದ ಮತದಾನ ಜಾಥಾದಲ್ಲಿ ಸ್ತಬ್ಧ ಚಿತ್ರ ಹಾಗೂ ವಿಡಿಯೋ ವಾಹನ ಅನಾವರಣ ಕಾರ್ಯಕ್ರಮವನ್ನು ಚಾಲನೆ ನೀಡಿ ಅವರು ಮಾತನಾಡಿದರು.  ಯಾದಗಿರಿ ಮತ್ತು ರಾಯಚೂರು ಲೋಕಸಭಾ ಚುನಾವಣೆ ಶಾಂತಿಯುತವಾಗಿ ಯಶಸ್ವಿಗೊಳಿಸಲು ಚುನಾವಣಾ ಇಲಾಖೆ ಮತ್ತು ತಾಲ್ಲೂಕು ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ ಎಂದು ಯಾದಗಿರಿ ಜಿಲ್ಲೆಯ ಸುರಪುರ ಚುನಾವಣಾಧಿಕಾರಿ ಕಾವ್ಯಾರಾಣಿ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಸುರಪುರ ನಗರದ ತಹಶೀಲ್ದಾರ್ ಕಚೇರಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಅವರು, ಉಪ ಚುನಾವಣೆಗೆ ಇದೇ ೧೨ರಂದು ನಾಮಪತ್ರ ಸಲ್ಲಿಕೆಗೆ ಪ್ರಕ್ರಿಯೆ ಆರಂಭವಾಗುತ್ತದೆ. ನಾಮಪತ್ರ ಸಲ್ಲಿಕೆಗೆ ಇದೇ ೧೯ ಕೊನೆ ದಿನವಾಗಿದೆ. ಏಪ್ರಿಲ್ ೨೦ರಂದು ನಾಮಪತ್ರಗಳ ಪರಿಶೀಲನೆ, ಹಾಗೂ ೨೨ ನಾಮಪತ್ರ ಹಿಂಪಡೆಯಲು ಕಡೆ ದಿನವಾಗಿದೆ. ಮೇ ೭ರಂದು ಮತದಾನ ನಡೆಯಲಿದ್ದು ಜೂನ್ ೪ರಂದು ಮತ ಏಣಿಕೆ ನಡೆಯಲಿದೆ ಎಂದು ಮಾಹಿತಿ ನೀಡಿದರು.

**<><*<><>*><>**

ಕಳೆದ ಲೋಕಸಭಾ ಚುನಾವಣೆಯಲ್ಲಿ ಮಂಡ್ಯ ಜಿಲ್ಲೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಗೆದ್ದಿದ್ದ ಸುಮಲತ ಅಂಬರೀಶ್ ಇಂದು ವಿಧ್ಯುಕ್ತವಾಗಿ ಬಿಜೆಪಿ ಪಕ್ಷಕ್ಕೆ ಸೇರ್ಪಡೆಗೊಂಡರು. ಸುಮಲತ ಅಂಬರೀಶ್ ಜೊತೆಗೆ ಮಾಜಿ ಲೋಕಸಭಾ ಸದಸ್ಯ ಎಲ್.ಆರ್.ಶಿವರಾಮೇಗೌಡ ಹಾಗೂ ಸುಮಲತ ಅಂಬರೀಶ್ ಬೆಂಬಲಿಗರು ಕೂಡ ಬಿಜೆಪಿಗೆ ಸೇರ್ಪಡೆಯಾದರು. ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ, ಮಾಜಿ ಸಚಿವ ಸಿ.ಟಿ.ರವಿ ಸೇರಿದಂತೆ ಬಿಜೆಪಿಯ ಹಲವು ಹಿರಿಯರು ಉಪಸ್ಥಿತರಿದ್ದರು.

<><*<><>*><>

ಅಮೆರಿಕಾದ ನ್ಯೂಯಾರ್ಕ್‌ನಲ್ಲಿ ಮೇ ೨೯ರಿಂದ ಜೂನ್ ೨ರವರೆಗೆ ನಡೆಯಲಿರುವ 'ವರ್ಲ್ಡ್ ಸೈನ್ಸ್ ಸ್ಕಾಲರ್ ಫೆಸ್ಟಿವಲ್'ಗೆ ದಕ್ಷಿಣ ಕನ್ನಡ ಜಿಲ್ಲೆಯ ಉಳ್ಳಾಲ ಮೊಗವೀರಪಟ್ಣದ ಕುಮಾರಿ ಸಿಂಧೂರ ರಾಜ ಅವರು ಆಯ್ಕೆಯಾಗಿದ್ದಾರೆ. ೨೨ ದೇಶಗಳ ೫೨ ಯುವ ವಿಜ್ಞಾನಿಗಳು ಈ ಉತ್ಸವದಲ್ಲಿ ಪಾಲ್ಗೊಳ್ಳಲಿದ್ದು, ಸಿಂಧೂರ ರಾಜ ಭಾರತವನ್ನು ಪ್ರತಿನಿಧಿಸಲಿದ್ದಾರೆ. ಅಲ್ಲಿ ಅವರು  ನೊಬೆಲ್ ಪ್ರಶಸ್ತಿ ವಿಜೇತ ವಿಜ್ಞಾನಿಗಳ ಜೊತೆ ವಿಚಾರ ವಿನಿಮಯ ನಡೆಸಲಿದ್ದಾರೆ. ಮೊಗವೀರಪಟ್ಣದ ರಾಜ ಟಿ ಮತ್ತು ಶಿಬಾನಿ ದಂಪತಿಯ ಪುತ್ರಿಯಾಗಿರುವ ಸಿಂಧೂರ ಬೆಂಗಳೂರಿನ ಇಂದಿರಾ ನಗರದ ನ್ಯೂ ಹೊರೈಝುನ್ ಪಬ್ಲಿಕ್ ಶಾಲೆಯ ೧೦ನೇ ತರಗತಿ ವಿದ್ಯಾರ್ಥಿನಿಯಾಗಿದ್ದಾರೆ. ಅಮೆರಿಕಾದ ಫ್ಯೂಚರ್ ಪೋರ್ಟ್ ಯೂತ್-೨೦೨೩ ಪ್ರೇಗ್ ಚೆಕ್ ರಿಪಬ್ಲಿಕ್ ಆಯೋಜಿಸಿದ್ದ 'ಮಾನವ ಸಮಾಜಕ್ಕೆ ವರದಾನವಾಗಲಿರುವ ವಿಷಯಗಳು' ಕುರಿತಾದ ಅಂತಾರಾಷ್ಟ್ರೀಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಸಿಂಧೂರ ೧ ಲಕ್ಷದ ೭೭ ಸಾವಿರ ನಗದು ಬಹುಮಾನದೊಂದಿಗೆ ಪ್ರಥಮ ಸ್ಥಾನ ಪಡೆದು ಆಯ್ಕೆಯಾಗಿದ್ದಾರೆ.  ಸಿಂಧೂರ ಅವರು, ಅರ್ಟಿಫಿಷಿಯಲ್ ಇಂಟಲಿಜೆನ್ಸ್ ಮಾಡಲ್ ಕುರಿತಾದ ಆವಿಷ್ಕಾರ ಮಂಡಿಸಿದರು.

<><*<><>*><>

ವಿಜಯಪುರ ಮತಕ್ಷೇತ್ರ ದರ್ಶನ

೨೦೨೪ರ ಲೋಕಸಭಾ ಚುನಾವಣಾ ವೇಳಾಪಟ್ಟಿ ಪ್ರಕಟವಾಗಿದ್ದು, ರಾಜ್ಯದಲ್ಲಿ ೨ ಹಂತಗಳಲ್ಲಿ ಮತದಾನ ನಡೆಯಲಿದೆ. ಲೋಕಸಭೆಯಲ್ಲಿ ಕರ್ನಾಟಕವನ್ನು ಪ್ರತಿನಿಧಿಸುವ ೨೮ ಸಂಸದರು ಕಾರ್ಯ ನಿರ್ವಹಿಸಲಿದ್ದು, ಈ ಪೈಕಿ ೧೪ ದಕ್ಷಿಣ ಲೋಕಸಭಾ ಕ್ಷೇತ್ರಗಳಲ್ಲಿ ಏಪ್ರಿಲ್ ೨೬ರಂದು ಮತದಾನ ನಡೆಯಲಿದೆ.  ರಾಜ್ಯದ ಉಳಿದ ೧೪ ಉತ್ತರ ಲೋಕಸಭಾ ಕ್ಷೇತ್ರಗಳಲ್ಲಿ ಮೇ ೭ರಂದು ಮತದಾನ ನಡೆಯುವುದು. ಎಲ್ಲ ೨೮ ಲೋಕಸಭಾ ಕ್ಷೇತ್ರಗಳ ಸಮಗ್ರ ಚಿತ್ರಣವನ್ನು ಒದಗಿಸುವ 'ಮತಕ್ಷೇತ್ರ ದರ್ಶನ' ಮಾಹಿತಿಯನ್ನು ಬೆಂಗಳೂರು ಆಕಾಶವಾಣಿ ಪ್ರಾದೇಶಿಕ ಸುದ್ದಿ ವಿಭಾಗದ ಜಿಲ್ಲಾವರದಿಗಾರರು ಸಿದ್ದಪಡಿಸಲಿದ್ದಾರೆ.  ಈಗ ತುಮಕೂರು  ಲೋಕಸಭಾ ಕ್ಷೇತ್ರದ ವಿವರಗಳು : ವರದಿಯನ್ನು ವಿಜಯಪುರ : ನಮ್ಮ ಜಿಲ್ಲಾ ಪ್ರತಿನಿಧಿ, ನೇತಾಜಿಗಾಂಧಿ ಠ್ಯಾಗೂರ್ ಮಹಾರಾಷ್ಟ್ರದ ಗಡಿಗೆ ಹೊಂದಿ ಕೊಂಡಿರುವ ಬಿಜಾಪುರ ಅಂದರೆ ವಿಜಯಪುರದಲ್ಲಿ ಬಿಸಿಲಿನ ತಾಪ ಏರುತ್ತಿದ್ದಂತೆ ಚುನಾವಣೆಯ ಕಾವೂ ಕೂಡಾ ಏರುತ್ತಲಿದೆ. ಭಾರತ ಚುನಾವಣೆ ಆಯೋಗವು ಲೋಕಸಭಾ ಸಾರ್ವತ್ರಿಕ ಚುನಾವಣೆ ೨೦೨೪ ರ ಅಧಿಸೂಚನೆಯನ್ನು ಹೊರಡಿಸಿದ್ದು ಜೂನ್ ೬ ರ ವರೆಗೆ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ಚುನಾವಣೆಯ ಅಧಿಸೂಚನೆಯನ್ನ ಏಪ್ರಿಲ್೧೨ ರಂದು ಹೊರಡಿಸಲಾಗುತ್ತದೆ. ಏ. ೧೯ ನಾಮಪತ್ರ ಸಲ್ಲಿಸುವ ಕೊನೆಯ ದಿನವಾಗಿದೆ. ಏ. ೨೦ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಏ. ೨೨ರಂದು ಉಮೇದುವಾರಿಕೆ ಹಿಂತೆಗೆದುಕೊಳ್ಳುವ ದಿನವಾಗಿದೆ.  ಮೆ. ೭ ರಂದು ಮತದಾನ ಹಾಗೂ ಜೂನ ೪ ರಂದು ಮತ ಎಣಿಕೆ ಕಾರ್ಯ ನಡೆಯಲಿದೆ. ವಿಜಯಪುರ ಜಿಲ್ಲೆಯಲ್ಲಿ ಸುಸೂತ್ರವಾಗಿ ಚುನಾವಣೆ ನಡೆಸಲು. ೯ ಜನ ಸಹಾಯಕ ಚುನಾವಣೆ ಅಧಿಕಾರಿಗಳನ್ನು ನೇಮಿಸಲಾಗಿದೆ.  ಜಿಲ್ಲೆಯಲ್ಲಿ ಒಟ್ಟು ೨೦೮೫ ಮತಗಟ್ಟೆಗಳಿದ್ದು, ೧೯,೧೯,೦೪೮ ಜನ ಮತದಾರರಿದ್ದಾರೆ. ಇದರಲ್ಲಿ ೯,೪೨,೭೫೭ ಮಹಿಳಾ, ೯,೪,೨೭೫೭ ಗಂಡು, ೨೧೮ ಇತರೆ ಮತದಾರರಿದ್ದಾರೆ. ೧,೭೧೫೯ ಜನರು ೮೫ ವರ್ಷ ಮೇಲ್ಪಟ್ಟ ಮತದಾರರು, ೨೧,೫೬೯ ವಿಶೇಷ ಚೇತನ ಮತದಾರರಿದ್ದಾರೆ.  ೮೫ ವರ್ಷ ಮೇಲ್ಪಟ್ಟ ಮತದಾರರಿಗೆ ಮನೆಯಿಂದಲೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗುತ್ತದೆ.  ಅಂಚೆ ಮತ ಪತ್ರ ವಿತರಿಸುವ ಕುರಿತಂತೆ ಭಾರತ ಚುನಾವಣೆ ಆಯೋಗವು ನೀಡುವ ನಿರ್ದೇಶನ ಅನುಸಾರ ಕ್ರಮ ವಹಿಸಿ ಪರಿಶೀಲಿಸಲಾಗುವುದು ಎಂದು ಜಿಲ್ಲಾಧಿಕಾರಿಗಳೂ ಸಹ ತಿಳಿಸಿದ್ದಾರೆ. ವಿಜಯಪುರ ಜಿಲ್ಲೆಯಲ್ಲಿ ಒಟ್ಟು ೨೯ ಚೆಕ್‌ಪೋಸ್ಟ್ ಗಳನ್ನು ಸ್ಥಾಪಿಸಲಾಗಿದ್ದು, ಅವುಗಳಲ್ಲಿ ೧೧ ಅಂತರ್ ರಾಜ್ಯ ಚೆಕ್‌ಪೋಸ್ಟ್, ೧೬ ಅಂತರ್ ಜಿಲ್ಲಾ ಚೆಕ್‌ಪೋಸ್ಟ್ ಗಳಿವೆ.

ಚುನಾವಣೆ ಪ್ರಕ್ರಿಯೆ ಶಾಂತಿ ಸುವ್ಯವಸ್ಥೆಯಿಂದ ನಡೆಸಲು ೮ ಡಿವಾಯ್‌ಎಸ್ಪಿ, ೨೯ ಪಿಎಸ್, ೬೦ ಪಿಎಸ್‌ಐ, ೧೧೮ ಎಎಸ್‌ಐ, ೧,೮೮೮ ಪಿಸಿ, ೬೭೯ ಹೋಮ್‌ಗಾರ್ಡ ಸೇರಿ ಒಟ್ಟು ೩೧೦೯ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ. ವಿಜಯಪುರ ಲೋಕಸಭಾ ಕ್ಷೇತ್ರವು ಮೀಸಲು ಕ್ಷೇತ್ರವಾಗಿದ್ದು, ಮುದ್ದೇಬಿಹಾಳ, ದೇವರ ಹಿಪ್ಪರಗಿ, ಬಸವನ ಬಾಗೇವಾಡಿ, ಬಬಲೇಶ್ವರ, ವಿಜಯಪುರ ನಗರ, ನಾಗಠಾಣ, ಇಂಡಿ ಮತ್ತು ಸಿಂದಗಿ ಹೀಗೆ ೦೮ ವಿಧಾನಸಭಾ ಕ್ಷೇತ್ರಗಳನ್ನು ಹೊಂದಿದೆ.

**<><*<><>*><>**

ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಕೇಂದ್ರ ಚುನಾವಣಾ ಆಯೋಗವು ದಕ್ಷಿಣ ಕನ್ನಡ ಜಿಲ್ಲೆಗೆ ಚುನಾವಣಾ ವೀಕ್ಷಕರನ್ನು ನಿಯೋಜನೆ ಮಾಡಿದೆ. ಐಎಎಸ್ ಅಧಿಕಾರಿ ಆಕಾಂಕ್ಷ ರಂಜನ್ ಅವರು ಚುನಾವಣಾ ಸಾಮಾನ್ಯ ವೀಕ್ಷಕರಾಗಿ ನಿಯೋಜನೆಗೊಂಡಿದ್ದು, ಅವರು ಇಂದು ನಗರದ ಜಿಲ್ಲಾಧಿಕಾರಿಯವರ ಕಚೇರಿಯಲ್ಲಿರುವ ಮಾಧ್ಯಮ ಪ್ರಮಾಣೀಕರಣ ಮತ್ತು ಮೇಲ್ವಿಚಾರಣಾ ಸಮಿತಿ ಹಾಗೂ ಸಾಮಾಜಿಕ ಜಾಲತಾಣ ನಿರ್ವಹಣಾ ಸಮಿತಿ ಕಚೇರಿಗೆ ಭೇಟಿ ನೀಡಿ, ಅಲ್ಲಿನ ಕಾರ್ಯಚಟುವಟಿಕೆಗಳನ್ನು ಪರಿಶೀಲಿಸಿಸರು. ಸಂದರ್ಭದಲ್ಲಿ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

**<><*<><>*><>**

ದಾವಣಗೆರೆ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆಗೆ ನೀತಿ ಸಂಹಿತೆ ಜಾರಿಯಾದಾಗಿನಿಂದ ಇಲ್ಲಿಯವರೆಗೂ ನಗದು ಸೇರಿದಂತೆ ೧ ಕೋಟಿ ೪೫ ಲಕ್ಷ ರೂಪಾಯಿಗೂ ಅಧಿಕ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಎಫ್.ಎಸ್.ಟಿ ತಂಡದಿಂದ ೭೫ ಲಕ್ಷದ ೯೨ ಸಾವಿರದ ೧೦೦ ರೂಪಾಯಿ ನಗದು ವಶಪಡಿಸಿಕೊಂಡು ಆದಾಯ ತೆರಿಗೆ ಇಲಾಖೆಗೆ ಒಪ್ಪಿಸಲಾಗಿದೆ. ಚೆಕ್‌ಪೋಸ್ಟ್‌ಗಳಲ್ಲಿ ದಾಖಲೆ ಇಲ್ಲದೆ ಕೊಂಡೊಯ್ಯುತ್ತಿದ್ದ ೫೧ ಲಕ್ಷದ ೮೯ ಸಾವಿರ ರೂಪಾಯಿ ವಶಕ್ಕೆ ಪಡೆಯಲಾಗಿದ್ದು, ಇದೇ ಅವಧಿಯಲ್ಲಿ ೨ ಲಕ್ಷದ ೬೦ ಸಾವಿರದ ೪೯೯ ಮೌಲ್ಯದ ೯೭೩ ಲೀಟರ್ ಅಕ್ರಮ ಮದ್ಯ ವಶಪಡಿಸಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ ೨೧ ಫ್ಲೈಯಿಂಗ್ ಸ್ಕ್ವಾಡ್‌ಗಳು, ೩೨ ಚೆಕ್‌ಪೋಸ್ಟ್‌ಗಳಲ್ಲಿ ದಿನದ ೨೪ ಗಂಟೆಗಳ ಕಾಲ ದಿನದ ಪಾಳಿಯಲ್ಲಿ ಚುನಾವಣಾ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇದಲ್ಲದೆ ೬ ಅಬಕಾರಿ ಜಾಗೃತ ದಳ ಕಾರ್ಯನಿರ್ವಹಿಸುತ್ತಿದ್ದು ಆಯಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿಯು ಗಸ್ತು ನಡೆಸಲಾಗುತ್ತಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**